# ಜಿಲ್ಲಾ ಪಂಚಾಯತಿ, ವಿಜಯನಗರ

ದಿನಾಂಕ:03-03-2022 ರಂದು ಬೆಳಿಗ್ಗೆ:11.00 ಗಂಟೆಗೆ ಜಿಲ್ಲಾ ಒಳಾಂಗಣ ಕ್ರೀಡಾಂಗಣ ಸಭಾಭವನ, ವಿಜಯನಗರ ಕಾಲೇಜು ಮೈದಾನ, ಚಿತ್ತವಾಡಿಗಿ, ಹೊಸಪೇಟೆಯಲ್ಲಿ **ಶ್ರೀಮತಿ ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ, ಸನ್ಮಾನ್ಯ ಮುಜರಾಯಿ ಹಜ್ ಮತ್ತು ವಕ್ಫ್ ಸಚಿವರು, ಕರ್ನಾಟಕ ಸರ್ಕಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ** ಅಧ್ಯಕ್ಷತೆಯಲ್ಲಿ ಜರುಗಿದ ಜಿಲ್ಲಾ ಮಟ್ಟದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದ (20 ಅಂಶ ಸೇರಿದಂತೆ) ದಿನಾಂಕ: 01-04-2021 ರಿಂದ 31-12-2021 ರ ಅವಧಿಯ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ನಡವಳಿಗಳು.

*****

**ಸಭೆಯಲ್ಲಿ ಹಾಜರಿದ್ದವರು**

**ಲೋಕಸಭಾ ಸದಸ್ಯರು:**

1) ಶ್ರೀ ವೈ. ದೇವೇಂದ್ರಪ್ಪ, ಮಾನ್ಯ ಲೋಕ ಸಭಾ ಸದಸ್ಯರು, ಬಳ್ಳಾರಿ.

**ವಿಧಾನ ಸಭಾ ಸದ್ಯಸ್ಯರು**

1) ಶ್ರೀ ಎಂ.ಕರುಣಾಕರ ರೆಡ್ಡಿ, ಮಾನ್ಯ ವಿಧಾನ ಸಭಾ ಸದಸ್ಯರು, ಹರಪನಹಳ್ಳಿ ಕ್ಷೇತ್ರ

**ವಿಧಾನ ಪರಿಷತ್ ಸದ್ಯಸ್ಯರು**

1) ಶ್ರೀ ವೈ.ಎಂ. ಸತೀಶ್, ಮಾನ್ಯ ವಿಧಾನ ಪರಿಷತ್ ಸದಸ್ಯರು, ಬಳ್ಳಾರಿ ಕ್ಷೇತ್ರ

**ಹಾಜರಿದ್ದ ಅಧಿಕಾರಿಗಳು:**

1) ಜಿಲ್ಲಾಧಿಕಾರಿಗಳು, ವಿಜಯನಗರ
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿ.ಪಂ. ವಿಜಯನಗರ
3) ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ವಿಜಯನಗರ ಜಿಲ್ಲೆ
4) ಸಹಾಯಕ ಆಯುಕ್ತರು, ಉಪ ವಿಭಾಗ, ಹೊಸಪೇಟೆ
5) ಉಪಕಾರ್ಯದರ್ಶಿ(ಅಭಿವೃದ್ಧಿ), ಜಿ.ಪಂ. ವಿಜಯನಗರ
6) ಮುಖ್ಯ ಯೋಜನಾಧಿಕಾರಿಗಳು, ಜಿಲ್ಲಾ ಪಂಚಾಯತ್, ವಿಜಯನಗರ
7) ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತ್, ವಿಜಯನಗರ
8) ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ವಿಜಯನಗರ
9) ಸಹಾಯಕ ಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತ್, ವಿಜಯನಗರ
10) ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿ ಪುಸ್ತಕದಲ್ಲಿದ್ದಂತೆ

******

ಪ್ರಾರಂಭದಲ್ಲಿ ಸಭೆಯನ್ನು ನಾಡಗೀತೆಯನ್ನು ಹಾಡುವುದರ ಮೂಲಕ ಪ್ರಾರಂಭಿಸಲಾಯಿತು. ನಂತರ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ದಿನಾಂಕ:03-03-2022 ಮೊದಲನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಗೆ ಶ್ರೀಮತಿ ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ, ಸನ್ಮಾನ್ಯ ಮುಜರಾಯಿ ಹಜ್ ಮತ್ತು ವಕ್ಫ್ ಸಚಿವರು, ಕರ್ನಾಟಕ ಸರ್ಕಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರನ್ನು ತುಂಬು ಹೃದಯದಿಂದ ಸಭೆಗೆ ಸ್ವಾಗತಿಸಿದರು. ಮತ್ತು ಶ್ರೀ ವೈ ದೇವೇಂದ್ರಪ್ಪ, ಮಾನ್ಯ ಲೋಕಸಭಾ ಸದಸ್ಯರು, ಬಳ್ಳಾರಿ, ಇವರನ್ನು , ಶ್ರೀ ಎಂ.ಕರುಣಾಕರ ರೆಡ್ಡಿ, ಮಾನ್ಯ ವಿಧಾನ ಸಭಾ ಸದಸ್ಯರು, ಹರಪನಹಳ್ಳಿ ಕ್ಷೇತ್ರ , ಶ್ರೀ ವೈ.ಎಂ. ಸತೀಶ್, ಮಾನ್ಯ ವಿಧಾನ ಪರಿಷತ್ ಸದಸ್ಯರು, ಬಳ್ಳಾರಿ ಕ್ಷೇತ್ರ ಇವರುಗಳನ್ನು ಸಹ ಸಭೆಗೆ ಹೃತ್ಪೂರ್ವಕವಾಗಿ ಸ್ವಾಗತಿಸಿದರು. ಹಾಗೂ ಮಾನ್ಯ ಜಿಲ್ಲಾಧಿಕಾರಿಗಳನ್ನು, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳನ್ನು ಹಾಗೂ ಸಭೆಯಲ್ಲಿ ಹಾಜರಿದ್ದ ಪತ್ರಿಕಾ ಪ್ರತಿನಿಧಿಗಳು ಸೇರಿದಂತೆ ದೃಶ್ಯ ಮಾಧ್ಯಮದವರನ್ನು ಮತ್ತು ಜಿಲ್ಲಾಮಟ್ಟದ, ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು. ನಂತರ ಸಭೆಯನ್ನು ನಡೆಸಿಕೊಡುವಂತೆ ಮಾನ್ಯರಲ್ಲಿ ಮನವಿ ಮಾಡುತ್ತಾ ಸದರಿ ಸಭೆಯ ಪೂರ್ವದಲ್ಲಿ ಈ ಕೆಳ ಕಾಣಿಸಿದಂತೆ ವಿವಿಧ ಯೋಜನೆಯಡಿ ಫಲಾನುಭವಿಗಳಿಗೆ ಸಾಂಕೇತಿಕವಾಗಿ ಪ್ರಮಾಣ ಪತ್ರಗಳನ್ನು ಹಾಗು ಚೆಕ್‌ಗಳನ್ನು ವಿತರಿಸಲು ಕೋರಿದರು.



Scanned by CamScanner

ಮೊದಲಿಗೆ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಹಾಗು ವೇದಿಕೆಯಲ್ಲಿದ್ದ ಗಣ್ಯರಿಗೆ ಎನ್.ಆರ್.ಎಲ್.ಎಂ. ಯೋಜನೆಯಡಿ ಸ್ವಯಂ ಉದ್ಯೋಗ ಮಾಡುತ್ತಿರುವ ಮಹಿಳಾ ಒಕ್ಕೂಟ ಸದಸ್ಯರುಗಳಿಂದ ತಯಾರಿಸಲಾದ ಆಹಾರ ಉತ್ಪನ್ನಗಳನ್ನೊಳಗೊಂಡ ಬಿದುರಿನಿಂದ ತಯಾರಿಸಿದ ಬುಟ್ಟಿಯನ್ನು ವೇದಿಕೆಯಲ್ಲಿದ್ದ ಗಣ್ಯರಿಗೆ ನೀಡಿ ಗೌರವ ಸಲ್ಲಿಸಲಾಯಿತು. ನಂತರ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರಿಂದ ಈ ಕೆಳಕಾಣಿಸಿದಂತೆ ವಿವಿಧ ಫಲಾನುಭವಿಗಳಿಗೆ ಚೆಕ್ ಮತ್ತು ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

1) ಕಲ್ಲಹಳ್ಳಿ ಗ್ರಾಮ ಪಂಚಾಯತಿ ಮಹಿಳಾ ಒಕ್ಕೂಟಗಳಿಗೆ ಸಮುದಾಯ ಬಂಡವಾಳ ನಿಧಿಯ ಚೆಕ್ ವಿತರಣೆ ಮಾಡಿದರು.

2) ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ 100 ಮಾನವ ದಿನಗಳನ್ನು ಪೂರೈಸಿದ ಕೌಶಲ್ಯ ತರಬೇತಿ ಪ್ರಮಾಣ ಪತ್ರವನ್ನು ಕೂಲಿ ಕಾರ್ಮಿಕರಿಗೆ ಗಣ್ಯರು ವಿತರಿಸಿದರು.

3) ಗ್ರಾಮೀಣ ಕೈಗಾರಿಕೆ ಇಲಾಖೆಯಿಂದ ನೀಡಿದ ಟೈಲರಿಂಗ್ ತರಬೇತಿಯನ್ನು ಪಡೆದ ಫಲಾನುಭವಿಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಟೈಲರಿಂಗ್ ಮಿಷನ್ ಗಣ್ಯರು ವಿತರಿಸಿದರು.

4) ಆಯುಷ್ ಇಲಾಖೆ ವತಿಯಿಂದ ವಾರ್ಷಿಕ ಕ್ಯಾಲೆಂಡ್ ಬಿಡುಗಡೆ ಮಾಡಿ ಆಯುಷ್ ಇಲಾಖೆಯಿಂದ ದೊರೆಯುವ ಔಷಧಿ ಕಿಟ್‌ಗಳನ್ನು ಗಣ್ಯರು ವಿತರಿಸಿದರು.

5) ಮೀನುಗಾರಿಕೆ ಇಲಾಖೆಯಿಂದ ಮೀನುಗಾರರಿಗೆ ಮೀನುಗಳನ್ನು ಮಾರಾಟ ಮಾಡಲು ದ್ವಿಚಕ್ರ ವಾಹನ ಖರೀದಿಸಿದ್ದಕ್ಕಾಗಿ ರೂ.10,000/- ಗಳ ಸಹಾಯ ಧನ ಚೆಕ್ ವಿತರಣೆ ಮಾಡಿದರು.

ನಂತರ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಮಾತನಾಡಿ, ಸಭೆಯಲ್ಲಿದ್ದ ಎಲ್ಲರನ್ನೂ ಮತ್ತೊಮ್ಮೆ ಸ್ವಾಗತಿಸುತ್ತಾ, ಹೊಸದಾಗಿ ವಿಜಯನಗರ ಜಿಲ್ಲೆ ರಚನೆಯಾಗಿರುವುದಿರಂದ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಒಟ್ಟಾಗಿ ಕೆಲಸ ಮಾಡಬೇಕಾಗಿದ್ದು, ಎಲ್ಲಾ ಅಧಿಕಾರಿಗಳ ಸಹಕಾರದೊಂದಿಗೆ ಸರ್ಕಾರದ ಎಲ್ಲಾ ಯೋಜನೆಗಳ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಬೇಕಾಗಿರುತ್ತದೆ. ಕಾರಣ ಪ್ರತಿ ತ್ರೈಮಾಸಿಕ ಕೆ.ಡಿ.ಪಿ. ಸಭೆಗೆ ಎಲ್ಲಾ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಪೂರ್ಣ ಮಾಹಿತಿಯೊಂದಿಗೆ ತಪ್ಪದೇ ಸಭೆಗೆ ಹಾಜರಾಗಲು ಸಭೆಯಲ್ಲಿ ಸೂಚಿಸಿದರು.

ನಂತರ ಮಾನ್ಯ ಜಿಲ್ಲಾಧಿಕಾರಿಗಳು, ವಿಜಯನಗರ ಇವರು ಜಿಲ್ಲೆಯ ಇಲಾಖಾವಾರು ಪ್ರಗತಿ ವರದಿಯೊಂದಿಗೆ ಇಲಾಖಾ ಕಾರ್ಯಕ್ರಮಗಳ ಪ್ರಗತಿಯನ್ನು ಸಭೆಗೆ ಮಂಡಿಸಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಿದರು.

1) **ಕೃಷಿ ಇಲಾಖೆ :**

ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬಳ್ಳಾರಿ ಇವರು ಸಭೆಗೆ ಪರಿಚಯ ಮಾಡಿಕೊಳ್ಳುತ್ತಾ, ಇಲಾಖಾ ಪ್ರಗತಿ ವರದಿಯನ್ನು ಸಭೆಗೆ ಮಂಡಿಸಿದರು. ಮಾನ್ಯ ಜಿಲ್ಲಾಧಿಕಾರಿಗಳು, ಮಾತನಾಡಿ ಜಿಲ್ಲೆಯಲ್ಲಿ ಮಳೆ ಆಗಿರುವ ಬಗ್ಗೆ ವಿವರಣೆ ಕೇಳ ಬಯಸಿದರು. ಇಲಾಖಾಧಿಕಾರಿಗಳು ಮಾತನಾಡಿ, ಜಿಲ್ಲೆಯಲ್ಲಿ ವಾಡಿಕೆ ಮಳೆ 642 ಮಿ.ಮೀ ಮಳೆ ಆಗಬೇಕಿತ್ತು. ಶೇ.20 % ಹೆಚ್ಚು ಮಳೆ ಆಗಿದೆ ಎಂದು ಸಭೆಗೆ ಮಾಹಿತಿ ನೀಡಿದರು. ಕೊಟ್ಟೂರು, ಹಗರಿಬೊಮ್ಮನಹಳ್ಳಿ ಮತ್ತು ಹಡಗಲಿ ತಾಲೂಕುಗಳಲ್ಲಿ ಶೇ.22 % , ಹರಪನಹಳ್ಳಿ ತಾಲೂಕಿನಲ್ಲಿ 10 %, ಕೂಡ್ಲಿಗಿ 18 % ಮಳೆ ಹೆಚ್ಚಾಗಿದೆ ಎಂದು ಸಭೆಗೆ ತಿಳಿಸಿದರು. ಬೆಳೆ ಹಾನಿಗೆ ಸಂಬಂಧಿಸಿದಂತೆ ಒಟ್ಟು 3333 ಹೆಕ್ಟೇರ್ ಬೆಳೆ ಹಾನಿಯಾಗಿರುತ್ತದೆ. ಈ ಪೈಕಿ 10860 ಫಲಾನುಭವಿಗಳಿಗೆ ಬೆಳೆ ಪರಿಹಾರದ ಮೊತ್ತವನ್ನು ನೀಡಲಾಗಿರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು.

ಶ್ರೀ ಎಂ.ಕರುಣಾಕರ ರೆಡ್ಡಿ, ವಿಧಾನ ಸಭಾ ಸದಸ್ಯರು, ಹರಪನಹಳ್ಳಿ ವಿಧಾನ ಸಭಾ ಕ್ಷೇತ್ರ ಇವರು ಮಾತನಾಡಿ, ಹರಪನಹಳ್ಳಿ ತಾಲೂಕಿನಲ್ಲಿ ಈರುಳ್ಳಿ ಬೆಳೆ ಹಾನಿ ಆಗಿರುವ ಬಗ್ಗೆ ವಿವರ ನೀಡುವಂತೆ ಸೂಚಿಸಿದರು. ಈ ಕುರಿತು ಬೆಳೆ ಹಾನಿ ಆಗಿರುವ ಬಗ್ಗೆ ಇಲಾಖಾ ತಂತ್ರಾಂಶದಲ್ಲಿ ಅಳವಡಿಸುವ ಸಂಬಂಧ ಏನಾದರೂ ತಾಂತ್ರಿಕ ತೊಂದರೆ ಇದ್ದಲ್ಲಿ ಕೂಡಲೇ ಸರಿಪಡಿಸಿ, ಬೆಳೆ ಹಾನಿಗೊಳಗಾದ ರೈತರ ಮಾಹಿತಿಯನ್ನು ಅಳವಡಿಸಲು ಕೂಡಲೇ ಕ್ರಮವಹಿಸುವಂತೆ ಇಲಾಖಾಧಿಕಾರಿಗಳಿಗೆ ಮಾನ್ಯ ಸಚಿವರು ಸಭೆಯಲ್ಲಿ ಸೂಚಿಸಿದರು.



Scanned by CamScanner

ಶ್ರೀ ವೈ.ದೇವೇಂದ್ರಪ್ಪ, ಲೋಕಸಭೆ ಸದಸ್ಯರು, ಬಳ್ಳಾರಿ ಇವರು ಮಾತನಾಡಿ, ಕೊಟ್ಟೂರು ತಾಲೂಕಿನಲ್ಲಿ ಬೀಜ ಸಂಗ್ರಹಣೆ ಮತ್ತು ವಿತರಣೆ ಕೇಂದ್ರವನ್ನು ಪ್ರಾರಂಭಿಸಿದರೆ ಹರಪನಹಳ್ಳಿ ಮತ್ತು ದಾವಣಗೆರೆ ಭಾಗದ ರೈತರಿಗೆ ಅನುಕೂಲವಾಗುತ್ತದೆ. ಕಾರಣ ಬೀಜಕೇಂದ್ರ ಪ್ರಾರಂಭಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸಭೆಯಲ್ಲಿ ಕೋರಿದರು. ಜಿಲ್ಲಾಧಿಕಾರಿಗಳು ಮಾತನಾಡಿ ಈ ಕುರಿತು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಇಲಾಖಾಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಿದರು.

**(ಕ್ರಮ: ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬಳ್ಳಾರಿ/ವಿಜಯನಗರ)**

2) **ತೋಟಗಾರಿಕೆ ಇಲಾಖೆ :**

ತೋಟಗಾರಿಕೆ ಉಪ ನಿರ್ದೇಶಕರು ಇವರು ಮಾತನಾಡಿ, ಪ್ರಸಕ್ತ ಸಾಲಿನಲ್ಲಿ 10854 ಹೆಕ್ಟೇರ್ ಮೆಣಸಿನಕಾಯಿ, ಈರುಳ್ಳಿ ಸೇರಿದಂತೆ ಬೆಳೆ ಹಾನಿಯಾಗಿರುತ್ತದೆ ಎಂದು ಸಭೆಗೆ ತಿಳಿಸಿದರು. ಮಾನ್ಯ ಲೋಕಸಭಾ ಸದಸ್ಯರು, ಬಳ್ಳಾರಿ ಇವರು ಮಾತನಾಡಿ, ಹರಪನಹಳ್ಳಿ ತಾಲೂಕಿನಲ್ಲಿ ಪಾಲಿ ಹೌಸ್‌ಗಳು ಹೆಚ್ಚಾಗಿ ಇರುವುದರಿಂದ ಇಲಾಖಾಧಿಕಾರಿಗಳು ಪಾಲಿಹೌಸ್‌ಗಳಿಗೆ ಭೇಟಿ ನೀಡದೇ ಇರುವ ಬಗ್ಗೆ ದೂರುಗಳು ಬರುತ್ತಿದ್ದು, ಪ್ರಯುಕ್ತ ಪಾಲಿಹೌಸ್‌ಗಳಿಗೆ ಅಧಿಕಾರಿಗಳು ಖುದ್ದು ಭೇಟಿ ನೀಡಲು ಸಭೆಯಲ್ಲಿ ಸೂಚಿಸಿದರು. ಹಾಗೂ ಈ ವಿಷಯದ ಬಗ್ಗೆ ಸಾರ್ವಜನಿಕರಿಗೆ ಹೆಚ್ಚಿನ ಪ್ರಚಾರ ಮಾಡಲು ಕ್ರಮಕೈಗೊಳ್ಳುವಂತೆ ಸೂಚಿಸಿದರು. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ 639 ಹೆಕ್ಟೇರ್ ಗುಲಾಬಿ ಬೆಳೆಯಲು ಅವಕಾಶವಿರುತ್ತದೆ ಎಂದು ಉಪ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

ಮಾನ್ಯ ಸಚಿವರು ಈ ಕುರಿತು ಮಾತನಾಡಿ, ಇಲಾಖಾಧಿಕಾರಿಗಳು ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳ ಬಗ್ಗೆ ಗ್ರಾಮ ಮಟ್ಟದಲ್ಲಿ ಹೆಚ್ಚಿನ ಪ್ರಚಾರ ಕೈಗೊಂಡಾಗ ಮಾತ್ರ ಸರ್ಕಾರದ ಕಾರ್ಯಕ್ರಮಗಳು ಯಶಸ್ವಿಯಾಗಿ ಅನುಷ್ಠಾನವಾಗುವಲ್ಲಿ ಸಾಧ್ಯವಾಗುತ್ತದೆ. ಆದ್ದರಿಂದ ಆಯಾ ತಾಲೂಕಿನ ಜನಪ್ರತಿನಿಧಿಗಳೊಂದಿಗೆ ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಶಾಸಕರ ಅಧ್ಯಕ್ಷತೆಯಲ್ಲಿ ಪ್ರಚಾರ ಕಾರ್ಯಕ್ರಮವನ್ನು ಹಮ್ಮಿಕೊಂಡು ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಲು ಸಭೆಯಲ್ಲಿ ಸೂಚಿಸಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿ.ಪಂ,ವಿಜಯನಗರ ಇವರು ಮಾತನಾಡಿ, ತೋಟಗಾರಿಕೆ ಬೆಳೆಗಳ ಪ್ರಚುರ ಪಡಿಸಲು ಲಿಂಕ್ ಡಾಕ್ಯೂಮೆಂಟ್ ಅನುದಾನದಲ್ಲಿ ವಾರ್ಷಿಕವಾಗಿ ಯೋಜನೆಗಳ ಪ್ರಚಾರಕ್ಕಾಗಿ ಅನುದಾನ ಬಿಡುಗಡೆಯಾಗುತ್ತಿದ್ದು, ಅದರನ್ವಯ ಸಮರ್ಪಕವಾಗಿ ವೆಚ್ಚ ಮಾಡಿ ಕಾರ್ಯಕ್ರಮ ಅನುಷ್ಠಾನ ಮಾಡಲು ಸಭೆಯಲ್ಲಿ ಇಲಾಖಾಧಿಕಾರಿಗಳಿಗೆ ಸೂಚಿಸಿದರು.

**(ಕ್ರಮ: ತೋಟಗಾರಿಕೆ ಉಪ ನಿರ್ದೇಶಕರು,(ಜಿ.ಪಂ) ಬಳ್ಳಾರಿ/ವಿಜಯನಗರ)**

3) **ಪಶು ಪಾಲನಾ ಮತ್ತು ಪಶು ವೈದ್ಯಕೀಯ ಇಲಾಖೆ :**

ಉಪ ನಿರ್ದೇಶಕರು, ಪಶು ಪಾಲನಾ ಮತ್ತು ಪಶು ವೈದ್ಯಕೀಯ ಇಲಾಖೆ, ಇವರು ಮಾತನಾಡಿ ಇಲಾಖಾ ಪ್ರಗತಿ ವರದಿಗಳನ್ನು ಸಭೆಗೆ ತಿಳಿಸಿದರು. ಇಲಾಖಾಧಿಕಾರಿಗಳು ಮಾತನಾಡಿ ಕೃತಕ ಗರ್ಭಧಾರಣೆ ಕಾರ್ಯಕ್ರಮದಡಿ ಸಂಚಿತ ಗುರಿ – 54867 ಇದ್ದು, ಈ ಪೈಕಿ 56574 ಸಾಧಿಸಿದ್ದು, ಶೇ.103 % ಸಾಧನೆ ಮಾಡಲಾಗಿದೆ ಎಂದು ಸಭೆಗೆ ತಿಳಿಸಿದರು. ಕಾಲುಬಾಯಿ ಜ್ವರದ ಲಸಿಕೆ ಹಾಕುವ ಕಾರ್ಯಕ್ರಮದಡಿ ಸಂಚಿತ 336019 ಇದ್ದು, 298615 ಸಾಧಿಸಿದ್ದು, ಶೇ.89 % ಸಾಧನೆ ಮಾಡಲಾಗಿರುತ್ತದೆ. ಆದರೆ ಹರಪನಹಳ್ಳಿ ತಾಲೂಕಿಗೆ ಸರಬರಾಜು ಆಗಬೇಕಿದ್ದ ಲಸಿಕೆಯು ದಾವಣಗೆರೆಯಿಂದ ಸರಬರಾಜು ಆಗಿದ್ದರಿಂದ 2 ನೇ ಹಂತದ ಲಸಿಕೆ ಕಾರ್ಯಕ್ರಮ ಪ್ರಗತಿ ಸ್ವಲ್ಪ ಕುಂಠಿತವಾಯಿತು ಎಂದು ಸಭೆಗೆ ಮಾಹಿತಿ ನೀಡಿದರು.



Scanned by CamScanner

ಮಾನ್ಯ ಸಚಿವರು ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು ಎಷ್ಟು ಪಶು ಆಸ್ಪತ್ರೆಗಳು, ಎಷ್ಟು ಜನ ವೈದ್ಯರು ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ ಮಾಹಿತಿ ನೀಡುವಂತೆ ಸಭೆಯಲ್ಲಿ ಸೂಚಿಸಿದರು. ಈ ಕುರಿತು ಇಲಾಖಾಧಿಕಾರಿಗಳು ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 96 ಪಶು ವೈದ್ಯ ಸಂಸ್ಥೆಗಳಿದ್ದು, 48 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ, ಖಾಲಿ ಇರುವ ಹುದ್ದೆಗಳಿಗೆ ವೈದ್ಯರ ಕೊರತೆ ಇರುವುದಾಗಿ ಸಭೆಗೆ ತಿಳಿಸಿದಾಗ , ಮಾನ್ಯ ಸಚಿವರು ಮಾತನಾಡಿ ಲಭ್ಯವಿರುವ ವೈದ್ಯರನ್ನು ಸಮರ್ಪಕವಾಗಿ ಎರಡು ಕೇಂದ್ರಗಳಿಗೆ ನಿಯೋಜನೆ ಮಾಡಿ ವೇಳಾಪಟ್ಟಿಯಂತೆ ಕರ್ತವ್ಯ ನಿರ್ವಹಿಸಲು ಕ್ರಮವಹಿಸುವಂತೆ ಇಲಾಖಾಧಿಕಾರಿಗಳಿಗೆ ಸೂಚಿಸಿದರು.

ಇಲಾಖಾಧಿಕಾರಿಗಳು ಮಾತನಾಡಿ, ಹಗರಿಬೊಮ್ಮನಹಳ್ಳಿ ತಾಲೂಕಿನ ವರಲಹಳ್ಳಿ ಗ್ರಾಮದಲ್ಲಿ 10.52 ಎಕರೆ ಜಮೀನನಲ್ಲಿ ಜಿಲ್ಲೆಗೊಂದು ಗೋಶಾಲೆ ಪ್ರಾರಂಭಿಸಲು ಸ್ಥಳ ನಿಗದಿಪಡಿಸಲಾಗಿದ್ದು, ಸದರಿ ಸ್ಥಳದಲ್ಲಿ ಗೋಶಾಲೆಯನ್ನು ಪ್ರಾರಂಭಿಸಲು **ರೂ.1.80 ಕೋಟಿಗಳ** ಅಂದಾಜು ಮೊತ್ತ ಕ್ರಿಯಾ ಯೋಜನೆಯನ್ನು ಈಗಾಗಲೇ ತಯಾರಿಸಿ ಜಿಲ್ಲಾ ಪಂಚಾಯತಿಗೆ ಅನುಮೋದನೆಗಾಗಿ ಸಲ್ಲಿಸಲಾಗಿರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು. ಹಾಗೂ ಬರಡು ರಾಸುಗಳ ಶಿಬಿರ ಕಾರ್ಯಕ್ರಮ ಹಮ್ಮಿಕೊಂಡು ಲಸಿಕೆ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು.

**(ಕ್ರಮ:ಉಪ ನಿರ್ದೇಶಕರು, ಪಶು ಪಾಲನಾ ಮತ್ತು ಪಶು ವೈದ್ಯಕೀಯ ಇಲಾಖೆ, ವಿಜಯನಗರ/ಬಳ್ಳಾರಿ)**

4) **<u>ಆಹಾರ ಇಲಾಖೆ :</u>**

ಜಂಟಿ ನಿರ್ದೇಶಕರು, ಆಹಾರ ಇಲಾಖೆ, ಇವರು ಮಾತನಾಡಿ, ಇಲಾಖಾ ಪ್ರಗತಿ ವರದಿಯನ್ನು ಸಲ್ಲಿಸಿದರು. ಮಾನ್ಯ ಸಚಿವರು ಜಿಲ್ಲೆಯಲ್ಲಿ ರಾಗಿ ಖರೀದಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆ ಕೇಳಬಯಸಿದರು. ಈ ಕುರಿತು ಇಲಾಖಾಧಿಕಾರಿಗಳು ಮಾತನಾಡಿ ಕಳೆದ ವರ್ಷ ರಾಗಿ ಬೆಳೆಗೆ ಬೆಂಬಲ ಬೆಲೆ ರೂ.2,620/- ಪ್ರತಿ ಕ್ವಿಂಟಲ್‌ಗೆ ದರ ನಿಗದಿಯಾಗಿತ್ತು, ಆದರೆ ಈ ವರ್ಷ ರೂ.3,377/- ದರ ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು. ಹಾಗೆಯೇ ಈ ವರ್ಷ ಒಬ್ಬ ರೈತ ಕೇವಲ 20 ಕ್ವಿಂಟಲ್ ರಾಗಿಯನ್ನು ಮಾರಾಟ ಮಾಡಲು ಅವಕಾಶ ಇರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು.

ಪಡಿತರ ಚೀಟಿ ಪಡೆಯಲು ಒಟ್ಟು 15,160 ಅರ್ಜಿಗಳು ಸ್ವೀಕೃತವಾಗಿರುತ್ತವೆ. 574 ಕಾರ್ಡ್ ವಿತರಣೆ ಮಾಡಲಾಗಿದೆ. ಈವರೆಗೂ ಪಡಿತರ ಚೀಟಿಗಳನ್ನು ಪರಿಶೀಲನೆ ಮಾಡಿ ಒಟ್ಟು 2,642 ಪಡಿತರ ಚೀಟಿಗಳನ್ನು ವಜಾ ಮಾಡಿ ಕ್ರಮವಹಿಸಲಾಗಿರುತ್ತದೆ. ಹಾಗೂ ಇದುವರೆಗೆ ಅನಧಿಕೃತವಾಗಿ ಬಿ.ಪಿ.ಎಲ್. ಕಾರ್ಡ್ ಹೊಂದಿದ್ದ ಸರ್ಕಾರಿ ಹಾಗೂ ಇತರೆ ಸಾರ್ವಜನಿಕರಿಂದ ರೂ.18.286 ಲಕ್ಷ ದಂಡ ವಸೂಲಾತಿಯನ್ನು ಮಾಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

**(ಕ್ರಮ: ಜಂಟಿ ನಿರ್ದೇಶಕರು, ಆಹಾರ ಇಲಾಖೆ, ವಿಜಯನಗರ/ಬಳ್ಳಾರಿ)**

5) **<u>ಸಾರ್ವಜನಿಕ ಶಿಕ್ಷಣ ಇಲಾಖೆ :</u>**

ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರು ಮಾತನಾಡಿ, ಇಲಾಖಾ ಪ್ರಗತಿ ವರದಿಯನ್ನು ಸಲ್ಲಿಸಿದರು. ಜಿಲ್ಲೆಯಲ್ಲಿ ಒಟ್ಟು 1012 ಸರ್ಕಾರಿ /ಅನುದಾನಿತ ಶಾಲೆಗಳಿದ್ದು, 6114 ಹುದ್ದೆಗಳು ಭರ್ತಿಯಾಗಿದ್ದು, 1899 ಹುದ್ದೆಗಳು ಖಾಲಿ ಇರುತ್ತವೆ ಎಂದು ಸಭೆಗೆ ಮಾಹಿತಿ ನೀಡಿದರು. ಇದೇ ತಿಂಗಳ ಮಾರ್ಚ 28 ರಿಂದ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ನಡೆಯುತ್ತಿದ್ದು, ಜಿಲ್ಲೆಯ 72 ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು 22596 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಈ ಕುರಿತು ಇಲಾಖೆ ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸಜ್ಜಾಗಿದೆ ಎಂದು ತಿಳಿಸಿದರು.

ಶ್ರೀ ಕರುಣಾಕರರೆಡ್ಡಿ, ವಿಧಾನ ಸಭಾ ಸದಸ್ಯರು, ಹರಪನಹಳ್ಳಿ ವಿಧಾನ ಸಭಾ ಕ್ಷೇತ್ರ ಇವರು ಮಾತನಾಡಿ, ಹರಪನಹಳ್ಳಿ ತಾಲೂಕಿನಲ್ಲಿ ಅತಿಥಿ ಶಿಕ್ಷಕರ ಕೊರತೆ ಬಹಳ ಇದ್ದು ಈ ಬಗ್ಗೆ ಸೂಕ್ತ ಕ್ರಮವಹಿಸಲು ಸಭೆಯಲ್ಲಿ ಸೂಚಿಸಿದರು.



Scanned by CamScanner

ಶ್ರೀ ವೈ.ಎಂ.ಸತೀಶ್, ವಿಧಾನ ಪರಿಷತ್ ಸದಸ್ಯರು, ಬಳ್ಳಾರಿ ಇವರು ಮಾತನಾಡಿ, ಹಗರಿಬೊಮ್ಮನಹಳ್ಳಿ ತಾಲೂಕಿನ ತಂಬ್ರಹಳ್ಳಿ ಗ್ರಾಮದಲ್ಲಿ ಪದವಿ ಕಾಲೇಜ್ ಸ್ಥಾಪನೆಗೆ ಸಂಬಂಧಿಸಿದಂತೆ ತಂಬ್ರಹಳ್ಳಿಯಿಂದ ಹಗರಿಬೊಮ್ಮನಹಳ್ಳಿವರೆಗೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಪಾದಯಾತ್ರೆ ಮಾಡಿದ ಬಗ್ಗೆ ಪತ್ರಿಕೆಗಳಲ್ಲಿ ವರದಿಯಾಗಿದ್ದನ್ನು ಸಭೆಯ ಗಮನಕ್ಕೆ ತಂದರು. ಈ ಕುರಿತು ಮಾನ್ಯ ಸಚಿವರು ಮಾತನಾಡಿ, ಜಿಲ್ಲೆಯಲ್ಲಿ ಅವಶ್ಯವಿರುವ ಪದವಿ ಕಾಲೇಜ್, ಪದವಿ ಪೂರ್ವ ಕಾಲೇಜ್‌ಗಳ ಅನುಮೋದನೆಗೆ ಪ್ರಸ್ತಾವನೆಗಳನ್ನು ಸಲ್ಲಿಸುವಂತೆ ಇಲಾಖಾಧಿಕಾರಿಗಳಿಗೆ ಸೂಚಿಸಿದರು. ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕೂಡಲೇ ಸಲ್ಲಿಸಿದರೆ ಸಂಬಂಧಪಟ್ಟ ಸಚಿವರ ಜೊತೆ ಚರ್ಚಿಸಿ ಕ್ರಮವಹಿಸಲಾಗುವುದೆಂದು ಸಭೆಗೆ ತಿಳಿಸಿದರು.

ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ವಿಜಯನಗರ ಇವರು ಮಾತನಾಡಿ, ತಾಲೂಕಿನಲ್ಲಿ ಒಟ್ಟು 55 ಋತುಮಾನ ಕೇಂದ್ರಗಳನ್ನು ತೆರೆಯಲಾಗಿದ್ದು, 2150 ವಲಸೆ ಹೋದ ವಿದ್ಯಾರ್ಥಿಗಳಿಗೆ 3 ತಿಂಗಳಲ್ಲಿ ಶಿಕ್ಷಣವನ್ನು ನೀಡಲು ಕ್ರಮವಹಿಸಲಾಗಿದೆ ಎಂದು ಮಾಹಿತಿ ನೀಡಿದರು. ಮಾನ್ಯ ಜಿಲ್ಲಾಧಿಕಾರಿಗಳು ಮಾತನಾಡಿ, ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಪ್ರತಿ ತಾಲೂಕಿನಲ್ಲಿ ಪ್ರಗತಿ ಪರಿಶೀಲನೆ ಸಭೆ ನಡೆಸಿ ವರದಿ ಸಲ್ಲಿಸಲು ಇಲಾಖಾಧಿಕಾರಿಗಳಿಗೆ ಸೂಚಿಸಿದರು.

**(ಕ್ರಮ : ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ವಿಜಯನಗರ)**

6) **ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ :**

ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಹರಪನಹಳ್ಳಿ ಇವರು ಮಾತನಾಡಿ, ಇಲಾಖಾ ಪ್ರಗತಿ ವರದಿಯನ್ನು ಸಲ್ಲಿಸಿದರು. ಜೆ.ಜೆ.ಎಂ. ಯೋಜನೆಯಡಿ ಹರಪನಹಳ್ಳಿ ತಾಲೂಕಿನಲ್ಲಿ ಒಟ್ಟು 23 ಕಾಮಗಾರಿಗಳ ಪೈಕಿ 13 ಕಾಮಗಾರಿಗಳು ಮುಕ್ತಾಯಗೊಳಿಸಲಾಗಿದೆ ಉಳಿದ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ ಎಂದು ಸಭೆಗೆ ಮಾಹಿತಿ ನೀಡಿದರು.

ಶ್ರೀ ಕರುಣಾಕರರೆಡ್ಡಿ, ವಿಧಾನ ಸಭಾ ಸದಸ್ಯರು, ಹರಪನಹಳ್ಳಿ ವಿಧಾನ ಸಭಾ ಕ್ಷೇತ್ರ ಇವರು ಮಾತನಾಡಿ, ಹಳ್ಳಿಗಳಲ್ಲಿ ಒ.ಹೆಚ್.ಟಿ. ಟ್ಯಾಂಕ್‌ಗಳು ಲೀಕೇಜ್ / ದುರಸ್ಥಿಯಲ್ಲಿದ್ದು, ಜನಸಂಖ್ಯೆಗೆ ಅನುಗುಣವಾಗಿ ಓ.ಹೆಚ್.ಟಿ. ಟ್ಯಾಂಕ್‌ಗಳನ್ನು ನಿರ್ಮಾಣ ಮಾಡುವ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಸೂಚಿಸುತ್ತಾ, ಪ್ರತಿ ಓ.ಹೆಚ್.ಟಿ. ಟ್ಯಾಂಕ್‌ಗಳಿಗೆ ಸಂಬಂಧಿಸಿದ ಇಂಜಿನಿಯರ್‌ಗಳು ಭೇಟಿ ನೀಡಲು ಸಭೆಯಲ್ಲಿ ಸೂಚಿಸಿದರು.

ಶ್ರೀ ವೈ.ದೇವೇಂದ್ರಪ್ಪ, ಲೋಕಸಭೆ ಸದಸ್ಯರು, ಬಳ್ಳಾರಿ ಇವರು ಮಾತನಾಡಿ, ಜೆ.ಜೆ.ಎಂ. ಯೋಜನೆಯು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, ಪ್ರತಿ ಗ್ರಾಮದ ಪ್ರತಿ ಮನೆ ಮನೆಗೂ ನೀರು ಸರಬರಾಜು ಮಾಡುವ ಯೋಜನೆಯಾಗಿರುತ್ತದೆ. ಒಂದು ಮನೆಗೆ ನೀರು ಸರಬರಾಜು ಮಾಡಿ ಸಂಪರ್ಕ ಕಲ್ಪಿಸಲು ವೆಚ್ಚವಾಗಬಹುದಾದ ಮೊತ್ತವೆಷ್ಟು ಎಂದು ಸಭೆಯಲ್ಲಿ ಕೇಳಿದರು. ಹಾಗೆಯೇ ಈಗಾಗಲೇ ಸಾರ್ವಜನಿಕರು ಗ್ರಾಮ ಪಂಚಾಯತಿಯಿಂದ ನೀರಿನ ಸಂಪರ್ಕ ಪಡೆದುಕೊಂಡಿದ್ದು, ಈ ಬಗ್ಗೆ ಸ್ಥಳ ಪರಿಶೀಲಿಸಿ, ಸಂಬಂಧಿಸಿದ ಗುತ್ತಿಗೆದಾರರಿಂದ ಗುಣಮಟ್ಟದ ಸಾಮಾಗ್ರಿಗಳನ್ನು ಅಳವಡಿಸಿ ಯೋಜನೆಯ ಕಾಮಗಾರಿಯನ್ನು ಅನುಷ್ಠಾನ ಮಾಡಲು ಅಧಿಕಾರಿಗಳಿಗೆ ಸೂಚಿಸಿದರು. ಸದರಿ ಯೋಜನೆಯ ಬಗ್ಗೆ ಮಾನ್ಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು,ಜಿ.ಪಂ, ವಿಜಯನಗರ ಇವರು ಮೇಲುಸ್ತುವಾರಿ ಮಾಡುವಂತೆ ಸಭೆಯಲ್ಲಿ ಕೋರಿದರು.

ಶ್ರೀ ಕರುಣಾಕರರೆಡ್ಡಿ, ವಿಧಾನ ಸಭಾ ಸದಸ್ಯರು, ಹರಪನಹಳ್ಳಿ ವಿಧಾನ ಸಭಾ ಕ್ಷೇತ್ರ ಇವರು ಮಾತನಾಡಿ, 2018–19 ರಲ್ಲಿ ಡಿ.ಎಂ.ಎಫ್ ಯೋಜನೆಯಡಿಯಲ್ಲಿ ಕಾಮಗಾರಿ ಬದಲಾವಣೆಗೆ ಸಂಬಂಧಿಸಿದಂತೆ ಕಾಮಗಾರಿ ಪ್ರಸ್ತಾವನೆಯನ್ನು ಸಲ್ಲಿಸಿದರೂ ಸಹ ಈವರೆಗೂ ಕ್ರಮವಹಿಸಿರುವುದಿಲ್ಲವೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. ಹಾಗೂ ಗ್ರಾಮ ಪಂಚಾಯತಿಯಲ್ಲಿ ಜೆ.ಜೆ.ಎಂ. ಯೋಜನೆಯು ಅನುಷ್ಠಾನ ಆಗುತ್ತಿರುವುದರಿಂದ ಆಯಾ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು ಮೇಲುಸ್ತುವಾರಿ ಮಾಡಲು ಕ್ರಮವಹಿಸುವಂತೆ ಮಾನ್ಯ ಸಚಿವರು ಸಭೆಯಲ್ಲಿ ಸೂಚಿಸಿದರು.

ಮಾನ್ಯ ಸಚಿವರು ಮಾತನಾಡಿ, ಬೇಸಿಗೆ ಕಾಲ ಪ್ರಾರಂಭವಾಗುತ್ತಿರುವುದರಿಂದ ಕುಡಿಯುವ ನೀರಿನ ಸಮಸ್ಯೆ ಉಂಟಾಗಬಹುದಾದ ಗ್ರಾಮಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳುವಂತೆ ಸಭೆಯಲ್ಲಿ ಇಲಾಖಾಧಿಕಾರಿಗಳಿಗೆ ಸೂಚಿಸಿದರು.



Scanned by CamScanner

ಶ್ರೀ ವೈ.ದೇವೇಂದ್ರಪ್ಪ, ಲೋಕಸಭೆ ಸದಸ್ಯರು, ಬಳ್ಳಾರಿ ಇವರು ಮಾತನಾಡಿ, ಗ್ರಾ.ಕು.ನೀ.ನೈರ್ಮಲ್ಯ ಇಲಾಖೆಯು ನೀಡಿದ ಪ್ರಗತಿ ವರದಿಯು ಆಂಗ್ಲಭಾಷೆಯಲ್ಲಿರುತ್ತದೆ. ಎಲ್ಲಾ ಇಲಾಖೆಗಳ ಪ್ರಗತಿ ವರದಿಗಳನ್ನು ಕನ್ನಡದಲ್ಲೇ ತಯಾರಿಸಿ ಸಭೆಗೆ ಸಲ್ಲಿಸಲು ಸೂಚಿಸಿದರು. ಈ ಕುರಿತು ಮಾನ್ಯ ಜಿಲ್ಲಾಧಿಕಾರಿಗಳು ಮಾತನಾಡಿ, ಮುಂದಿನ ಎಲ್ಲಾ ಸಭೆಗಳಿಗೆ ನಿಗದಿತ ನಮೂನೆಯಲ್ಲಿ ವರದಿಗಳನ್ನು ಕನ್ನಡದಲ್ಲಿಯೇ ಸಿದ್ಧಪಡಿಸಿ ಸಭೆಗೆ ಸಲ್ಲಿಸಬೇಕು ಇಲ್ಲವಾದಲ್ಲಿ ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ನೋಟೀಸ್ ಜಾರಿ ಮಾಡಲಾಗುವುದೆಂದು ಎಚ್ಚರಿಸಿದರು.

**(ಕ್ರಮ: ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಹರಪನಹಳ್ಳಿ/ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು / ಜಿಲ್ಲೆಯ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು)**

7) **ಆರೋಗ್ಯ ಇಲಾಖೆ :**

ಜಿಲ್ಲಾ ಆರೋಗ್ಯಾಧಿಕಾರಿಗಳು, ವಿಜಯನಗರ / ಬಳ್ಳಾರಿ ಇವರು ಮಾತನಾಡಿ, ಪಲ್ಸ್ ಪೋಲೀಯೊ ಕಾರ್ಯಕ್ರಮ ಹಮ್ಮಿಕೊಂಡಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು. ನಂತರ ಕ್ಷಯ ರೋಗ ನಿಯಂತ್ರಣ ಕಾರ್ಯಕ್ರಮದಡಿ 1620 ರೋಗಿಗಳನ್ನು ಗುರುತಿಸಲಾಗಿದ್ದು, ಶೇ.48.10 % ಸಾಧನೆ ಮಾಡಲಾಗಿರುತ್ತದೆ. ಇದರಿಂದಾಗಿ ರಾಜ್ಯದಲ್ಲಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳು ಎರಡನೇ ಸ್ಥಾನದಲ್ಲಿರುತ್ತವೆ ಎಂದು ಸಭೆಗೆ ಮಾಹಿತಿ ನೀಡಿದರು. ಡೆಂಗ್ಯೂ ಜ್ವರ ಕಾರ್ಯಕ್ರಮದಡಿ ಒಟ್ಟು 479 ರೋಗಿಗಳನ್ನು ಪರೀಕ್ಷೆಗೆ ಒಳಪಡಿಸಲಾಗಿದ್ದು, 73 ರೋಗಿಗಳಲ್ಲಿ ಡೆಂಗ್ಯೂ ಜ್ವರ ದೃಢಪಟ್ಟಿರುತ್ತದೆ. (ಹರಪನಹಳ್ಳಿ–11, ಕೂಡ್ಲಿಗಿ–12, ಹೊಸಪೇಟೆ–17 ಪ್ರಕರಣಗಳು).

ಕೋವಿಡ್–19 ಸಾಂಕ್ರಾಮಿಕ ರೋಗಕ್ಕೆ ವ್ಯಾಕ್ಸಿನೇಷನ್ ಹಾಕುವ ಕಾರ್ಯಕ್ರಮದಡಿ ಶೇ.99 % ಸಾಧನೆ ಮಾಡಲಾಗಿತ್ತದೆ. 18–21 ವರ್ಷದೊಳಗಿನ 60470 ವಯೋಮಾನದವರಿಗೆ ಲಸಿಕೆ ಹಾಕಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಮುಂದುವರೆದು ಇಲಾಖಾಧಿಕಾರಿಗಳು ಮಾತನಾಡಿ, ವಿಜಯನಗರ ಜಿಲ್ಲೆಗೆ ಸಂಬಂಧಿಸಿದಂತೆ ಒಟ್ಟು 49 ಪ್ರಾಥಮಿಕ ಆರೋಗ್ಯ ಕೇಂದ್ರಗಳಿದ್ದು, 80 ವೈದ್ಯರು ಖಾಯಂ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ಸಭೆಗೆ ಮಾಹಿತಿ ನೀಡಿದರು. ಕೊಟ್ಟೂರು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ತಾಲೂಕು ಸಾರ್ವಜನಿಕ ಆಸ್ಪತ್ರೆಯನ್ನಾಗಿ ಪರಿವರ್ತಿಸಲು ಜಂಟಿಯಾಗಿ ಕಾರ್ಯನಿರ್ವಾಹಕ ಅಭಿಯಂತರರು ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಆರೋಗ್ಯಾಧಿಕಾರಿಗಳು ಭೇಟಿ ಮಾಡಿ ವರದಿ ನೀಡಲು ಕ್ರಮವಹಿಸುವಂತೆ ಮಾನ್ಯ ಜಿಲ್ಲಾಧಿಕಾರಿಗಳು ಈಗಾಗಲೇ ಸೂಚನೆ ನೀಡಿರುತ್ತಾರೆಂದು ಸಭೆಗೆ ಮಾಹಿತಿ ನೀಡಿದರು.

ಶ್ರೀ ವೈ ಎಂ ಸತೀಶ್, ವಿಧಾನ ಪರಿಷತ್ ಸದಸ್ಯರು, ಬಳ್ಳಾರಿ ಇವರು ಮಾತನಾಡಿ, ಹೊಸಪೇಟೆಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಹಾಗೂ ಇಟ್ಗಿ ಗ್ರಾಮದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹೆರಿಗೆ ತಜ್ಞ ವೈದ್ಯರ ಸಮಸ್ಯೆ ಇರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು.

ಶ್ರೀ ವೈ.ದೇವೇಂದ್ರಪ್ಪ, ಲೋಕಸಭೆ ಸದಸ್ಯರು, ಬಳ್ಳಾರಿ ಇವರು ಮಾತನಾಡಿ, ಪ್ರತಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ಒಂದೊಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸಭೆಯಲ್ಲಿ ಸೂಚಿಸಿದರು.

ಮಾನ್ಯ ಸಚಿವರು ಮಾತನಾಡಿ, ಜಿಲ್ಲೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳಿಗೆ ವೈದ್ಯರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಿದರು.

**(ಕ್ರಮ : ಜಿಲ್ಲಾ ಆರೋಗ್ಯಾಧಿಕಾರಿಗಳು, ಆರೋಗ್ಯ ಇಲಾಖೆ, ವಿಜನಯಗರ/ಬಳ್ಳಾರಿ)**



Scanned by CamScanner

8) **ಆಯುಷ್ ಇಲಾಖೆ :**

ಇಲಾಖಾಧಿಕಾರಿಗಳು ಮಾತನಾಡಿ, ಜಿಲ್ಲೆಯಾದ್ಯಂತ ಮನೆ ಮದ್ದು, ಇತರೆ ಆಯುಷ್ ಕಾರ್ಯಕ್ರಮಗಳನ್ನು ಮನೆ ಮನೆಗೆ ಕೋವಿಡ್‌ನ 1.2 ಲಕ್ಷ ಕಿಟ್‌ಗಳನ್ನು ಹಂಚಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

**(ಕ್ರಮ : ಜಿಲ್ಲಾ ಆಯುಷ್ ಅಧಿಕಾರಿಗಳು, ಆಯುಷ್ ಇಲಾಖೆ, ವಿಜಯನಗರ/ಬಳ್ಳಾರಿ)**

9) **ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ :**

ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಇವರು ಮಾತನಾಡಿ, ವಿಜಯನಗರ ಜಿಲ್ಲೆಯಲ್ಲಿ ಒಟ್ಟು 1660 ಅಂಗನವಾಡಿ ಕೇಂದ್ರಗಳಿದ್ದು, ಒಟ್ಟು 166728 ಮಕ್ಕಳಿದ್ದಾರೆ ಹಾಗೂ 1340 ಸ್ವಂತ ಕಟ್ಟಡಗಳಿರುತ್ತವೆ ಎಂದು ಸಭೆಗೆ ಮಾಹಿತಿ ನೀಡಿದರು. ವಿಜಯನಗರ ಜಿಲ್ಲೆಯಲ್ಲಿ ಖಾಲಿ ಇರುವ 17 ಅಂಗನವಾಡಿ ಕಾರ್ಯಕರ್ತೆ, 53 ಸಹಾಯಕಿಯರ ಹುದ್ದೆಗಳಿಗೆ ಮಾನ್ಯ ಜಿಲ್ಲಾಧಿಕಾರಿಗಳು ಪ್ರಕಟಣೆಯನ್ನು ಹೊರಡಿಸಿರುತ್ತಾರೆ ಎಂದು ಸಭೆಗೆ ಮಾಹಿತಿ ನೀಡಿದರು.

ಶ್ರೀ ವೈ.ದೇವೇಂದ್ರಪ್ಪ, ಲೋಕಸಭೆ ಸದಸ್ಯರು, ಬಳ್ಳಾರಿ ಇವರು ಮಾತನಾಡಿ, ವಿಜಯನಗರ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಅಂಗನವಾಡಿ ಸ್ವಂತ ಕಟ್ಟಡಗಳಿಗೆ ಕಾಮಗಾರಿಗಳು ಅನುಮೋದನೆಯಾಗಿದ್ದರೂ ಸಹ ಈವರೆಗೂ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸದೇ ಇರುವ ಇಲಾಖೆವಾರು / ತಾಲೂಕುವಾರು ವರ್ಷವಾರು ಮಾಹಿತಿಯನ್ನು ನೀಡುವಂತೆ ಸಭೆಯಲ್ಲಿ ಕೋರಿದರು.

ಇಲಾಖಾಧಿಕಾರಿಗಳು ಮಾತನಾಡಿ, 45 ಅಂಗನವಾಡಿ ಕಟ್ಟಡ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ಈ ಪೈಕಿ ಪಂ.ರಾಜ್.ಇಂ.ಉಪವಿಭಾಗ-41 ಮತ್ತು ಕೆ.ಆರ್.ಐ.ಡಿ.ಎಲ್.,- 04 ಕಾಮಗಾರಿಗಳು ಪ್ರಗತಿ ಹಂತದಲ್ಲಿರುತ್ತವೆ ಎಂದು ಇಲಾಖಾಧಿಕಾರಿಗಳು ತಿಳಿಸಿದರು. ನಿರ್ಮಿತಿ ಕೇಂದ್ರದಿಂದ -08 ಅಂಗನವಾಡಿ ಕಟ್ಟಡ ಕಾಮಗಾರಿಗಳು 09 ತಿಂಗಳಾದರೂ ಸಹ ಪ್ರಾರಂಭಿಸದೇ ಬಾಕಿ ಇರುತ್ತವೆ (ಕೂಡ್ಲಿಗಿ-02, ಹಡಗಲಿ-06) ಎಂದು ತಿಳಿಸಿದರು.

ಮಾನ್ಯ ಜಿಲ್ಲಾಧಿಕಾರಿಗಳು, ಮಾತನಾಡಿ, ಅಂಗನವಾಡಿ ಕೇಂದ್ರಗಳನ್ನು ಕಟ್ಟಲು ನಿವೇಶನ ತೊಂದರೆ ಇದ್ದರೆ ಸಂಬಂಧಿಸಿದ ತಹಶೀಲ್ದಾರರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು ಖುದ್ದು ಸ್ಥಳ ಪರಿಶೀಲನೆ ಮಾಡಿ ಸಮಸ್ಯೆ ಬಗೆಹರಿಸಲು ಸಭೆಯಲ್ಲಿ ಸೂಚಿಸಿದರು.

ಮಾನ್ಯ ಸಚಿವರು ಮಾತನಾಡಿ, ಭಾಗ್ಯಲಕ್ಷ್ಮೀ ಬಾಂಡ್ ವಿತರಿಸಿದ ಮಾಹಿತಿಯನ್ನು ಬಯಸಿದಾಗ ಉಪನಿರ್ದೇಶಕರು ಮಾತನಾಡಿ 1357 ಭಾಗ್ಯಲಕ್ಷ್ಮೀ ಬಾಂಡ್ ವಿತರಣೆ ಮಾಡಲಾಗಿದೆ ಎಂದು ತಿಳಿಸಿದರು. ಮುಂದುವರೆದು ಮಾನ್ಯ ಸಚಿವರು ಮಾತನಾಡಿ ಜನ ಪ್ರತಿನಿಧಿಗಳ ಉಪಸ್ಥಿತಿಯಲ್ಲಿ ಕಾರ್ಯಕ್ರಮವನ್ನು ಮಾಡಿ ಬಾಂಡ್‌ಗಳನ್ನು ವಿತರಿಸಲು ಸೂಚಿಸಿದರು.

**(ಕ್ರಮ: ಜಿಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ವಿಜಯನಗರ / ಬಳ್ಳಾರಿ, ಎಲ್ಲಾ ತಹಶೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು )**

10) **ಅಂಬೇಡ್ಕರ್ ಅಭಿವೃದ್ಧಿ ನಿಗಮ :**

ಇಲಾಖಾಧಿಕಾರಿಗಳು ಮಾತನಾಡಿ, 2021-22 ನೇ ಸಾಲಿನ ಗಂಗಾ ಕಲ್ಯಾಣ ಯೋಜನೆಯಡಿ ಹಡಗಲಿ-04, ಹಗರಿಬೊಮ್ಮನಹಳ್ಳಿ-02, ಹೊಸಪೇಟೆ-05, ಕೂಡ್ಲಿಗಿ-05, ಹರಪನಹಳ್ಳಿ-05 ಗುರಿಯನ್ನು ನಿಗದಿಪಡಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಕರುಣಾಕರರೆಡ್ಡಿ, ವಿಧಾನ ಸಭಾ ಸದಸ್ಯರು, ಹರಪನಹಳ್ಳಿ ವಿಧಾನ ಸಭಾ ಕ್ಷೇತ್ರ ಇವರು ಮಾತನಾಡಿ, 2018 ರಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಈವರೆಗೂ ಬೋರ್ ಹಾಕಿಸಲು ಕ್ರಮವಹಿಸಲಾಗಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು. ಹಾಗೂ ಬೋರ್ ಹಾಕಿದವರಿಗೆ ಕೂಡಲೇ ಪಂಪ್‌ಸೆಟ್ ಮತ್ತು ಇತರೆ ನೀರಾವರಿ ಸಾಮಾಗ್ರಿಗಳನ್ನು ವಿತರಿಸಲು ಕ್ರಮವಹಿಸುವಂತೆ ಸೂಚಿಸಿದರು.



Scanned by CamScanner

ಮುಂದುವರೆದು ಸದರಿ ಯೋಜನೆಯನ್ನು ಅನುಷ್ಠಾನ ಮಾಡಲು ಸರ್ಕಾರದ ಮಟ್ಟದಲ್ಲಿ ಟೆಂಡರ್ ಪ್ರಕ್ರಿಯೆ ನಡೆಯುವುದರಿಂದ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಕಾಲವಿಳಂಬ ಆಗುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಜಿಲ್ಲಾ ಮಟ್ಟದಲ್ಲಿಯೇ ಟೆಂಡರ್ ಕರೆಯುವ ಬಗ್ಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸಭೆಯಲ್ಲಿ ಇಲಾಖಾಧಿಕಾರಿಗಳಿಗೆ ಮಾನ್ಯ ಸಚಿವರು ಸೂಚಿಸಿದರು.

**(ಕ್ರಮ: ಜಿಲ್ಲಾ ಅಭಿವೃದ್ಧಿ ಅಧಿಕಾರಿಗಳು, ಅಂಬೇಡ್ಕರ್ ಅಭಿವೃದ್ಧಿ ನಿಗಮ, ವಿಜಯನಗರ / ಬಳ್ಳಾರಿ)**

11) **ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ :**

ಇಲಾಖಾಧಿಕಾರಿಗಳು ಮಾತನಾಡಿ ಜಿಲ್ಲೆಗೆ 32 ಗುರಿ ಇದ್ದು, 2018-19ರಲ್ಲಿ ಬೋರ್ ಕೊರೆಯಲಾಗಿದೆ. 2018-19ರ ಪೈಕಿ 3 ಸರ್ವೀಸ್ ಕಾಮಗಾರಿಗಳು ಬಾಕಿ ಇವೆ. ಒಂದು ವಾರದಲ್ಲಿ ಸರ್ವೀಸ್ ನೀಡಲಾಗುವುದೆಂದು ಸಭೆಗೆ ಮಾಹಿತಿ ನೀಡಿದರು.

**(ಕ್ರಮ: ಜಿಲ್ಲಾ ಅಭಿವೃದ್ಧಿ ಅಧಿಕಾರಿಗಳು, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ, ವಿಜಯನಗರ / ಬಳ್ಳಾರಿ)**

12) **ಕರ್ನಾಟಕ ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮ :**

ಇಲಾಖಾಧಿಕಾರಿಗಳು ಮಾತನಾಡಿ, ಜಿಲ್ಲೆಗೆ ವಾರ್ಷಿಕ ಗುರಿ 5 ನಿಗದಿಯಾಗಿರುತ್ತದೆ. ಎಂದು ಸಭೆಗೆ ಮಾಹಿತಿ ನೀಡಿದರು. ಮಾನ್ಯ ಜಿಲ್ಲಾಧಿಕಾರಿಗಳು ಮಾತನಾಡಿ, ಗಂಗಾ ಕಲ್ಯಾಣ ಕಾರ್ಯಕ್ರಮಗಳಡಿ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ ಎಲ್ಲಾ ಗಂಗಾ ಕಲ್ಯಾಣ ಸಂಬಂಧಪಟ್ಟ ಇಲಾಖಾಧಿಕಾರಿಗಳು ಹಾಗೂ ಜೆಸ್ಕಾಂ/ಬೆಸ್ಕಾಂ ಅಧಿಕಾರಿಗಳೊಂದಿಗೆ ಸಭೆ ಮಾಡಿ ತ್ವರಿತಗತಿಯಲ್ಲಿ ವಿದ್ಯುತ್ ಸಂಪರ್ಕ ಒದಗಿಸಲು ಕ್ರಮವಹಿಸಲು ಸೂಚಿಸಿದರು.

**(ಕ್ರಮ: ಜಿಲ್ಲಾ ಅಭಿವೃದ್ಧಿ ಅಧಿಕಾರಿಗಳು, ಅಂಬೇಡ್ಕರ್ ಅಭಿವೃದ್ಧಿ ನಿಗಮ, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ, ದೇವರಾಜ್ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮ, ವಿಜಯನಗರ/ಬಳ್ಳಾರಿ, ಕಾರ್ಯನಿರ್ವಾಹಕ ಅಭಿಯಂತರರು, ಜೆಸ್ಕಾಂ, ಹೊಸಪೇಟೆ/ಹಬ್ಬೊಹಳ್ಳಿ, ಕಾರ್ಯನಿರ್ವಾಹಕ ಅಭಿಯಂತರರು, ಬೆಸ್ಕಾಂ, ಹರಿಹರ )**

13) **ಕರ್ನಾಟಕ ನೀರಾವರಿ ನಿಗಮ ಲಿಮಿಟೆಡ್ ನಂ.1 ಟಿಆರ್ ಡಿವಿಜನ್, ಮುನಿರಾಬಾದ್ :**

ಇಲಾಖಾಧಿಕಾರಿಗಳು ಮಾತನಾಡಿ, ನಂ.-1 ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಕಾರ್ಯಕ್ರಮ, ಮುನಿರಾಬಾದ್, ರಡಿ 03 ಜಿಲ್ಲೆಗಳ 04 ಕಾಲುವೆ ಕಾಮಗಾರಿಗಳ ಟೆಂಡರ್ ಕರೆಯಲಾಗಿದೆ ಎಂದು ಸಭೆಗೆ ತಿಳಿಸಿದರು. ಹಾಗೂ ಹಗರಿಬೊಮ್ಮನಹಳ್ಳಿ ತಾಲೂಕಿನ ಚಿಲಿವಾರ ಬಂಡಿ ಏತನೀರಾವರಿ ಕಾಲುವೆ ಕಾಮಗಾರಿಯ ಅಂದಾಜು ಮೊತ್ತ ರೂ.103.00 ಕೋಟಿ ಆಗಿದ್ದು, ಇನ್ನೂ ಆರು ತಿಂಗಳಲ್ಲಿ ಕಾಮಗಾರಿ ಮುಕ್ತಾಯವಾಗಲಿದೆ ಎಂದು ತಿಳಿಸಿದರು. ಮತ್ತು ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಡಿ ಮಾಲವಿ ಜಲಾಶಯಕ್ಕೆ ತುಂಗಭದ್ರಾ ಹಿನ್ನೀರಿನಿಂದ ನೀರಿನ ಸರಬರಾಜು ಕಾಮಗಾರಿಯು 02 ತಿಂಗಳಲ್ಲಿ ಮುಕ್ತಾಯವಾಗಲಿದೆ. ಹಡಗಲಿ-19, ಕೂಡ್ಲಿಗಿ-74 ಕೆರೆಗಳು ಇರುವುದನ್ನು ಸಭೆಯ ಗಮನಕ್ಕೆ ತಂದರು. ಹೊಸಪೇಟೆ ತಾಲೂಕಿನ ಪಿ.ಕೆ.ಹಳ್ಳಿ 17 ಕೆರೆಗಳ ನೀರು ತುಂಬಿಸುವ ಯೋಜನೆ, 04 ಹೊಸ ಕೆರೆಗಳ ನಿರ್ಮಾಣ ಕಾಮಗಾರಿಗಳನ್ನು ಇನ್ನೂ 04 ತಿಂಗಳೊಳಗಾಗಿ ಮುಕ್ತಾಯಗೊಳಿಸಲಾಗುವುದೆಂದು ಹಾಗೂ ಕೊಟ್ಟೂರು ಕೆರೆಗೆ ಸಂಬಂಧಿಸಿದಂತೆ ಡಿಪಿಆರ್‌ನ್ನು ಸರ್ಕಾರಕ್ಕೆ ಸಲ್ಲಿಸಿದ್ದು ಸರ್ಕಾರದ ಅನುಮೋದನೆ ನಿರೀಕ್ಷೆಯಲ್ಲಿದೆ ಎಂದು ಸಭೆಗೆ ತಿಳಿಸಿದರು. ಕಾಲುವೆಗಳ ನವೀಕರಣ ಯೋಜನೆಯಡಿ ನಂ.1 ಟಿ.ಆರ್. ಡಿವಿಜನ್‌ಗೆ ಮೂರು ಜಿಲ್ಲೆಗಳಿಗೆ ಸೇರಿ ರೂ.371 ಕೋಟಿಗೆ ಸರ್ಕಾರದಿಂದ 2018ರಲ್ಲಿ ಮಂಜೂರಾತಿಯಾಗಿದ್ದು, ವಿಜಯನಗರ ಜಿಲ್ಲೆಗೆ ನಾಲ್ಕು ಕಾಲುವೆಗಳು ಬರುತ್ತಿದ್ದು, ರೂ.103 ಕೋಟಿ ನಿಗಧಿಯಾಗಿರುತ್ತದೆ. ಕೋವಿಡ್ ಹಾಗೂ ಲೇಬರ್ ತೊಂದರೆಯಿಂದಾಗಿ ಕಾಮಗಾರಿ ವಿಳಂಬವಾಗಿ ಈಗ ಪ್ರಾರಂಭವಾಗಿರುತ್ತದೆ. ಈಗಾಗಲೇ ರೂ.70 ಕೋಟಿ ಖರ್ಚಾಗಿದ್ದು 33 ಕೋಟಿ ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಕಾಲುವೆಗಳಿಗೆ ನಗರ ಸಭೆ ವ್ಯಾಪ್ತಿಯಲ್ಲಿ ಚರಂಡಿಯ ನೀರು ಬಿಡುತ್ತಿದ್ದು, divert ಮಾಡಲು ತಿಳಿಸಲಾಗಿದೆ



Scanned by CamScanner

ಇದರಿಂದ ಕಾಮಗಾರಿಗೆ ತೊಂದರೆಯಾಗುತ್ತದೆ ಎಂದು ಸಭೆಗೆ ತಿಳಿಸಿದರು. ನಂತರ ಮಾನ್ಯ ಜಿಲ್ಲಾಧಿಕಾರಿಗಳು ಮಾತನಾಡಿ ಹೊಸಪೇಟೆ ನಗರದಲ್ಲಿ ಚರಂಡಿ ನೀರು ಕಾಲುವೆಗಳಿಗೆ ಬಿಡಲಾಗುತ್ತದೆ, ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ ಇವರು ಯು.ಜಿ.ಡಿ. ಪ್ರೊಜೆಕ್ಟನಲ್ಲಿ ಎಲ್ಲೆಲ್ಲಿ ಕಾಲುವೆಗಳಿಗೆ ಚರಂಡಿ ನೀರು ಬಿಡಲಾಗುತ್ತದೆಯೋ ತಕ್ಷಣ Out service divert ಮಾಡಿ ಕ್ರಮವಹಿಸಲು ಸೂಚಿಸಿದರು.

ಶ್ರೀ ವೈ.ದೇವೇಂದ್ರಪ್ಪ, ಲೋಕಸಭೆ ಸದಸ್ಯರು, ಬಳ್ಳಾರಿ ಇವರು ಮಾತನಾಡಿ, ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದಿನಗೂಲಿ ನೌಕರರಿಗೆ ವೇತನ ಪಾವತಿಸಲು ಕೂಡಲೇ ಕ್ರಮವಹಿಸುವಂತೆ ಇಲಾಖಾಧಿಕಾರಿಗಳಿಗೆ ಸೂಚಿಸಿದರು.

**(ಕ್ರಮ: ಕಾರ್ಯಪಾಲಕ ಅಭಿಯಂತರರು, ಕೆ.ಎನ್.ಎನ್.ಎಲ್ ನಂ.1, ಟಿ.ಆರ್. ಡಿವಿಜಿಜನ್,**
**ಮುನಿರಾಬಾದ್ , ಕೊಪ್ಪಳ ಜಿಲ್ಲೆ)**

**14) <u>ಸಿಂಗಟಾಲೂರು ಏತ ನೀರಾವರಿ ಯೋಜನೆ, ನಂ-2 ವಿಭಾಗ, ಹೂವಿನಹಡಗಲಿ</u>:-**

ಕಾರ್ಯಪಾಲಕ ಇಂಜಿನೀಯರರು, ಫೆಬ್ರವರಿ-2022 ರವರೆಗಿನ ಪ್ರಗತಿ ವರದಿಯನ್ನು ಸಭೆಗೆ ಈ ಕೆಳಕಂಡಂತೆ ವಿವರಿಸಿದರು: ಸಿಂಗಟಾಲೂರು ಏತ ನೀರಾವರಿ ಯೋಜನೆ ಗದಗ ಜಿಲ್ಲೆ, ಕೊಪ್ಪಳ ಜಿಲ್ಲೆ ಹಾಗೂ ವಿಜಯನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಗದಗ, ಮುಂಡರಗಿ, ಕೊಪ್ಪಳ, ಯಲಬುರ್ಗ ಹಾಗೂ ಹೂವಿನಹಡಗಲಿ ತಾಲೂಕಗಳ ಬರಪೀಡಿತ ಪ್ರದೇಶಗಳಿಗೆ ನೀರಾವರಿ ಸೌಲಭ್ಯವನ್ನು ಕಲ್ಪಿಸುವ ಯೋಜನೆಯಾಗಿದೆ. ಅದರಂತೆ ಹೂವಿನಹಡಗಲಿ ವಿಭಾಗ-02 ಕಛೇರಿ ವ್ಯಾಪ್ತಿಯಲ್ಲಿ ಬರುವ ಯೋಜನೆಯ ಬಲಭಾಗದ ಮೊದಲನೇ ಹಂತದ ನೀರೆತ್ತುವ ಘಟಕ, ಎರಡನೇ ಹಂತದ ನೀರೇತ್ತುವ ಘಟಕ ಹಾಗೂ ಅವುಗಳಡಿ ಬರುವ ಕಾಲುವೆಗಳ ನಿರ್ಮಾಣ ಕಾಮಗಾರಿಗಳು ಈಗಾಗಲೇ ಪೂರ್ಣಗೊಂಡಿದ್ದು, ಒಟ್ಟು 203.991 ಕಿ.ಮೀ. ಉದ್ದದ ಕಾಲುವೆ ಜಾಲವನ್ನು ಹೊಂದಿರುತ್ತದೆ. 2012-13ನೇ ಸಾಲಿನಿಂದ ಹಂತ-ಹಂತವಾಗಿ ನೀರಾವರಿ ಸೌಲಭ್ಯವನ್ನು ಕಲ್ಪಿಸಲಾಗುತ್ತಿದ್ದು, 2015-16ನೇ ಸಾಲಿನಿಂದ ಪೂರ್ಣಪ್ರಮಾಣದಲ್ಲಿ ಹೂವಿನಹಡಗಲಿ ತಾಲ್ಲೂಕ್ಕಿನ ಒಟ್ಟು 35,791 ಎಕರೆ (14490 ಹೆಕ್ಟೇರ್) ಭೂಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಒದಗಿಸಲಾಗಿದೆ, ಪ್ರಸ್ತುತ ಹೂವಿನಹಡಗಲಿ ತಾಲೂಕಿನ ಅಚ್ಚುಕಟ್ಟು ಪ್ರದೇಶದ ಘೋಷಣೆ ಮಾಡಲು ಹಾಗೂ ರಾಜ್ಯ ಪತ್ರದಲ್ಲಿ ಹೊರಡಿಸಲು ಪ್ರಸ್ತಾವನೆಯನ್ನು ಸಂಬಂಧಿಸಿದ ಇಲಾಖೆಗೆ ಸಲ್ಲಿಸಲಾಗಿದ್ದು, ಅನುಮೋದನೆಯ ನಿರೀಕ್ಷಣೆಯಲ್ಲಿದೆ.

ಹಗರಿಬೊಮ್ಮನಹಳ್ಳಿ ತಾಲೂಕಿನ ಮಾಲಿವಿ ಜಲಾಶಯಕ್ಕೆ ನೀರು ತುಂಬಿಸುವ ಯೋಜನೆಯ ಜಾಕ್‌ವೆಲ್ ಕಾಮಗಾರಿಗಳು ಬಹುತೇಕ ಪೂರ್ಣಗೊಂಡಿದ್ದು, ಎಲೆಕ್ಟ್ರೋಮೆಕ್ಯಾನಿಕಲ್ ಹಾಗೂ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾಮಗಾರಿಗಳು ಪ್ರಗತಿಯಲ್ಲಿದೆ. ಅದರಂತೆ, 32.52 ಕಿ.ಮೀ. ಪೈಪ್‌ಲೈನ್ ಪೈಕಿ 30.80 ಕಿ.ಮೀ. ಪೈಪ್‌ಲೈನ್ ಅಳವಡಿಕೆಯ ಕಾಮಗಾರಿಗಳು ಪೂರ್ಣಗೊಂಡಿದ್ದು, ವಿವಿಧ ಚೈನೇಜ್‌ಗಳಲ್ಲಿ 1.72 ಕಿ.ಮೀ. ಪೈಪ್ ಅಳವಡಿಕೆಯ ಕಾಮಗಾರಿಗಳು ಪ್ರಗತಿಯಲ್ಲಿವೆ. ಇನ್ನುಳಿದಂತೆ ಸದರಿ ಯೋಜನೆಯನ್ನು ಮಾರ್ಚ್-2022ರ ಅಂತ್ಯಕ್ಕೆ ಪೂರ್ಣಗೊಳಿಸಿ ಪ್ರಾಯೋಗಿಕಚಾಲನೆ ನೀಡಲು ಯೋಜಿಸಲಾಗಿರುತ್ತದೆ.

ಹೂವಿನಹಡಗಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹತ್ತುಕೆರೆಗಳಿಗೆ ನೀರು ತುಂಬಿಸುವ ಯೋಜನೆಯು ನವೆಂಬರ್-2017ಕ್ಕೆ ಪೂರ್ಣಗೊಂಡಿದ್ದು, ಅದರಂತೆ ಎಲ್ಲಾ ಹತ್ತುಕೆರೆಗಳಿಗೆ ಯಶಸ್ವಿಯಾಗಿ ನೀರು ತುಂಬಿಸಲಾಗುತ್ತಿದೆ. ಆದರೆ, ಇತ್ತೀಚಿಗೆ ಯೋಜನೆಯ ಪೈಪ್‌ಲೈನ್‌ನ ಏರ್‌ವಾಲ್ವ್‌ಗಳಿಗೆ ಅಕ್ರಮವಾಗಿ ಟ್ಯಾಪಿಂಗ್ ಮಾಡಿಕೊಂಡು ಹಲವರು ನೀರು ಹಾಯಿಸಿಕೊಳ್ಳುತ್ತಿದ್ದು, ಪೈಪ್‌ಲೈನ್‌ಗಳಲ್ಲಿ ನೀರಿನ ಒತ್ತಡ ಇಳಿಕೆ ಆಗುತ್ತಿದ್ದು, ಯೋಜನೆ ಕೊನೆ ಭಾಗದ ತಳಕಲ್ಲುಕೆರೆಗೆ ಕಡಿಮೆ ಪ್ರಮಾಣದ ನೀರು ಹರಿಯುತ್ತಿದೆ. ಸದರಿ ಯೋಜನೆ ಕೊನೆಭಾಗದ ತಳಕಲ್ಲು ಕೆರೆಗೆ ನಿರಂತರವಾಗಿ ನೀರು ಹರಿಸುವ ಸಂಬಂಧ ಸೂಕ್ತ ಡಿ.ಪಿ.ಆರ್. ಪ್ರಸ್ತಾವನೆಯನ್ನು ತಯಾರಿಸಿ ಸದರಿ ಸಮಸ್ಯೆಯನ್ನು ನಿವಾರಿಸಲು ಸೂಕ್ತ ಕ್ರಮ ಜರುಗಿಸುವ ಪ್ರಯುಕ್ತ ತಳಕಲ್ಲು ಕೆರೆ ಸೇರಿ ಒಟ್ಟು 4 ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಯನ್ನು ಕೈಗೊಳ್ಳಲು ಅನುವಾಗುವಂತೆ ಡಿ.ಪಿ.ಆರ್. ಪ್ರಸ್ತಾವನೆಯನ್ನು ತಯಾರಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆಗಾಗಿ ಸಲ್ಲಿಸಲಾಗಿರುತ್ತದೆ. ಸದರಿ ಪ್ರಸ್ತಾವನೆಗೆ ಸಕ್ಷಮ ಪ್ರಾಧಿಕಾರದ ಅನುಮೋದನೆಯ ನಿರೀಕ್ಷಣೆಯಲ್ಲಿದ್ದು ಮುಂದಿನ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.



Scanned by CamScanner

ಮುಂದುವರೆದು, ಕೂಡ್ಲಿಗಿ ತಾಲೂಕಿನ 74 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯು ಪ್ರಗತಿಯಲ್ಲಿದ್ದು, ಪೈಪ್‌ಲೈನ್ ಅಳವಡಿಸುವ ಕಾಮಗಾರಿಗಳು ಸೇರಿದಂತೆ ಜಾಕ್‌ವೆಲ್ ನಿರ್ಮಿಸುವ ಕಾಮಗಾರಿಗಳು ಭರದಿಂದ ಸಾಗಿವೆ. ಅದರಂತೆ ಯೋಜನೆಯನ್ನು ಜುಲೈ-2023 ರ ಒಳಗಾಗಿ ಪೂರ್ಣಗೊಳಿಸಲು ಯೋಜಿಸಲಾಗಿರುತ್ತದೆ ಎಂದು ತಿಳಿಸಿದರು.

ಶ್ರೀ ವೈ.ಎಂ. ಸತೀಶ್, ವಿಧಾನ ಪರಿಷತ್ ಸದಸ್ಯರು, ಬಳ್ಳಾರಿ ಇವರು ಮಾತನಾಡಿ, ಇಲಾಖೆಯಿಂದ ಅನುಷ್ಠಾನ ಮಾಡಲಾಗುತ್ತಿರುವ ಎಲ್ಲಾ ಏತ ನೀರಾವರಿ ಯೋಜನೆಗಳ ವರದಿಗಳನ್ನು ನಂತರ ನೀಡಲು ಸೂಚಿಸಿದರು. ಪ್ರಗತಿಯಲ್ಲಿರುವ ಕುಡಿಯುವ ನೀರಿನ ಕಾಮಗಾರಿಗಳು ಕಳಪೆಯಾಗದೆ ಉತ್ತಮ ಗುಣಮಟ್ಟದ ಪೈಪ್‌ಗಳನ್ನು ಅಳವಡಿಸಲು ಸೂಚಿಸಿದರು.

**(ಕಾರ್ಯನಿರ್ವಾಹಕ ಅಭಿಯಂತರು, ಸಿಂಗಟಾಲೂರು ಏತ ನೀರಾವರಿ ಯೋಜನೆ ನಂ. 2 ವಿಭಾಗ, ಹಡಗಲಿ)**

15) **ಎನ್.ಆರ್.ಎಲ್.ಎಂ. ಯೋಜನೆ:**

ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತಿ, ವಿಜಯನಗರ ಮಾತನಾಡಿ, ತಾಲೂಕಿನಲ್ಲಿ ಒಟ್ಟು 5459 ಮಹಿಳಾ ಒಕ್ಕೂಟಗಳನ್ನು ರಚನೆ ಮಾಡಲಾಗಿದ್ದು, 64371 ಮಹಿಳಾ ಸದಸ್ಯರು ಸಂಘದ ಚಟುವಟಿಕೆಗಳಲ್ಲಿ ತೊಡಗಿರುತ್ತಾರೆ. ಗ್ರಾ.ಪಂ. ಮಟ್ಟದ 137 ಒಕ್ಕೂಟಗಳನ್ನು ರಚನೆ ಮಾಡಿ ಶೇ.100 ರಷ್ಟು ಗುರಿ ಸಾಧಿಸಲಾಗಿದೆ ಎಂದು ಸಭೆಗೆ ತಿಳಿಸಿದರು. ಮಾಸಿಕ ಸಂತೆ ನಡೆಸಲು ರೂ.15000/- ನಿಗದಿಪಡಿಸಿದ್ದು, ಈ ಪೈಕಿ ಹಡಗಲಿ, ಹಗರಿಬೊಮ್ಮನಹಳ್ಳಿ, ಹರಪನಹಳ್ಳಿ ತಾಲೂಕುಗಳಲ್ಲಿ ಮಾಸಿಕ ಸಂತೆ ನಡೆಸಲು ಆಯ್ಕೆ ಮಾಡಲಾಗಿರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು.

ಈ ಬಗ್ಗೆ ಮಾನ್ಯ ಸಚಿವರು ಮಾತನಾಡಿ, ಗ್ರಾಮ ಪಂಚಾಯತಿಗಳಲ್ಲಿ ಸ್ವ-ಸಹಾಯ ಸಂಘಗಳ ಉತ್ಪನ್ನಗಳನ್ನು ಮಾರಾಟಕ್ಕೆ ಸೂಕ್ತ ಮಾರುಕಟ್ಟೆ ವ್ಯವಸ್ಥೆಯನ್ನು ಕಲ್ಪಿಸುವಂತೆ ಸೂಚಿಸಿದರು. ಹಾಗೆಯೇ ಮಾಸಿಕ ಸಂತೆ ಮಾಡುವಾಗ ಎಲ್ಲಾ ಸ್ಥಳೀಯ ಶಾಸಕರುಗಳಿಗೆ ಮಾಹಿತಿ ನೀಡಿದಲ್ಲಿ ಸ್ಥಳೀಯವಾಗಿ ಹೆಚ್ಚು ಪರಿಣಾಮಕಾರಿಯಾಗುತ್ತದೆ ಎಂದು ಸೂಚಿಸಿದರು.

ಎನ್.ಆರ್.ಎಲ್.ಎಂ. ಯೋಜನೆಯು ಕೇಂದ್ರ ಮತ್ತು ರಾಜ್ಯ ಸರ್ಕಾರದ ಮಹಾತ್ವಕಾಂಕ್ಷೆ ಯೋಜನೆಯಾಗಿದ್ದು ಈ ಬಗ್ಗೆ ಸಾಕಷ್ಟು ಪ್ರಚಾರಕ್ಕೆ ಕ್ರಮವಹಿಸಲು ಸೂಚಿಸಿದರು.

16) **ಎಂ.ಜಿ.ಎನ್.ಆರ್.ಜಿ.ಎ ಯೋಜನೆ:**

ಉಪಕಾರ್ಯದರ್ಶಿ(ಅಭಿವೃದ್ಧಿ) ಜಿಲ್ಲಾ ಪಂಚಾಯತಿ, ವಿಜಯನಗರ ಮಾತನಾಡಿ, 2021-22ನೇ ಸಾಲಿನ ಎಂ.ಜಿ.ಎನ್.ಆರ್.ಇ.ಜಿ.ಎ ಯೋಜನೆಯಡಿ ಜಿಲ್ಲೆಗೆ 63.5 ಲಕ್ಷ ಮಾನವ ದಿನ ಸೃಜನೆ ನೀಡಲಾಗಿದ್ದು, ಈವರೆಗೆ 58.31 ಲಕ್ಷ ಮಾನವ ದಿನ ಸೃಜನೆ ಮಾಡಿ ಶೇ.87 ರಷ್ಟು ಗುರಿ ಸಾಧನೆ ಮಾಡಲಾಗಿದೆ ಎಂದು ಸಭೆಗೆ ವಿವರಣೆ ನೀಡಿದರು.

ಮಾನ್ಯ ಸಚಿವರು ಮಾತನಾಡಿ, ಕಾಮಗಾರಿ ಕೂಲಿ ಪಾವತಿಯ ವಿಳಂಬವಾಗುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರವಾಣಿ ಕರೆಗಳು ಬರುತ್ತಿದ್ದು, ಕಾಲಮಿತಿಯೊಳಗೆ ಕೂಲಿ ಪಾವತಿಗೆ ಕ್ರಮವಹಿಸುವಂತೆ ಸೂಚನೆಯನ್ನು ನೀಡಿದರು. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮಾತನಾಡಿ ಕೂಲಿ ಪಾವತಿಯು ಕಳೆದ ಒಂದು ತಿಂಗಳಿಂದ ಬಿಡುಗಡೆಗೆ ತಾಂತ್ರಿಕ ತೊಂದರೆಯಾಗಿರುತ್ತದೆ. ಹಾಗೆಯೇ ಸಾಮಗ್ರಿ ವೆಚ್ಚಕ್ಕೆ ಸಂಬಂಧಿಸಿದಂತೆ ಮರು ಎಫ್.ಟಿ.ಓ ಮಾಡಲು ವೇಳಾಪಟ್ಟಿಯನ್ನು ನಿಗದಿಪಡಿಸಿದ್ದು ಅದರಂತೆ ಕ್ರಮವಹಿಸಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

17) **ವಸತಿ ಯೋಜನೆ:**

ಮುಖ್ಯ ಯೋಜನಾಧಿಕಾರಿಗಳು, ಜಿಲ್ಲಾ ಪಂಚಾಯತಿ, ವಿಜಯನಗರ ಮಾತನಾಡಿ, 2021-22 ನೇ ಸಾಲಿನಲ್ಲಿ ಬಸವ ಮತ್ತು ಅಂಬೇಡ್ಕರ್ ವಸತಿ ಯೋಜನೆಯಡಿ 5170 ಮನೆಗಳ ಗುರಿ ನಿಗದಿಯಾಗಿರುತ್ತದೆ. ಈ ಪೈಕಿ ಜಿಲ್ಲೆಯಲ್ಲಿ ಗ್ರಾಮ ಸಭೆಗಳನ್ನು ನಡೆಸಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯು ಭಾಗಶಃ



Scanned by CamScanner

ಪೂರ್ಣಗೊಂಡಿರುತ್ತದೆಂದು ಸಭೆಗೆ ಮಾಹಿತಿ ನೀಡಿದರು. ಜಿಲ್ಲೆಯಲ್ಲಿ ಒಟ್ಟು 21 ಅಮೃತ ಗ್ರಾಮ ಪಂಚಾಯತಿಗಳು ಆಯ್ಕೆ ಆಗಿದ್ದು, ಈ ಪೈಕಿ 19 ಗ್ರಾಮ ಪಂಚಾಯತಿಗಳ ಮಾಹಿತಿಯು ಜಿಲ್ಲಾ ಪಂಚಾಯತಿಗೆ ಸಲ್ಲಿಕೆಯಾಗಿರುತ್ತದೆ. ಇಲ್ಲಿಯವರೆಗೆ ಪಿ.ಎಂ.ಎ.ವೈ ಯೋಜನೆಯಡಿ-10644, ಅಂಬೇಡ್ಕರ್ ಯೋಜನೆಯಡಿ -940, ವಾಜಪೇಯಿ ವಸತಿ ಯೋಜನೆಯಡಿ -2738 ಮನೆಗಳು ಪೂರ್ಣಗೊಂಡಿರುತ್ತವೆಂದು ಸಭೆಗೆ ಮಾಹಿತಿ ನೀಡಿದರು.

ವಿಜಯನಗರ ಜಿಲ್ಲೆಯಲ್ಲಿ ವಿವಿಧ ವಸತಿ ಯೋಜನೆಗಳಡಿ ನಿವೇಶನ ರಹಿತರಿಗೆ ನಿವೇಶನ ಹಂಚಲು ಸರ್ಕಾರಿ / ಖಾಸಗಿ ವ್ಯಕ್ತಿಗಳಿಂದ ಒಟ್ಟು 28.64 ಎಕರೆ ಜಾಗ ಲಭ್ಯವಿರುವ ಬಗ್ಗೆ ಪ್ರಸ್ತಾವನೆಗಳು ಸಲ್ಲಿಕೆಯಾಗಿರುತ್ತವೆ ಎಂದು ಸಭೆಗೆ ತಿಳಿಸಿದರು.

ಮಾನ್ಯ ಶಾಸಕರು, ಹರಪನಹಳ್ಳಿ ವಿಧಾನ ಸಭಾ ಕ್ಷೇತ್ರ ಇವರು ಮಾತನಾಡಿ ನಿವೇಶನ ರಹಿತರಿಗೆ ನಿವೇಶನ ಹಂಚಿಕೆ ಮಾಡಲು ಯಾವ ರೀತಿ ಯೋಜನೆ ರೂಪಿಸಿದ್ದೀರಿ ಎಂದು ಕೇಳಿದರು. ಇದಕ್ಕೆ ಮಾನ್ಯ ಮುಖ್ಯ ಯೋಜನಾಧಿಕಾರಿಗಳು ಮಾತನಾಡಿ ಆಯಾ ಗ್ರಾಮದಲ್ಲಿ ಲಭ್ಯವಿರುವ ಸರ್ಕಾರಿ ಜಮೀನನ್ನು ಆಶ್ರಯ ನಿವೇಶನ ಯೋಜನೆಯಡಿ ಮಾನ್ಯ ಜಿಲ್ಲಾಧಿಕಾರಿಗಳವರಿಂದ ಮಂಜೂರಾತಿ ಮಾಡಿಕೊಂಡು ನಿವೇಶನ ಹಂಚಿಕೆ ಮಾಡಲು ವಸತಿ ನಿಗಮ, ಬೆಂಗಳೂರು ಇವರಿಂದ ಅನುಮೋದನೆ ಪಡೆದುಕೊಂಡು ಕ್ರಮವಹಿಸಲಾಗುವುದೆಂದು ಸಭೆಗೆ ತಿಳಿಸಿದರು.

ಮಾನ್ಯ ಜಿಲ್ಲಾಧಿಕಾರಿಗಳು ಮಾತನಾಡಿ, ಆಶ್ರಯ ಯೋಜನೆಯಡಿ ಸರ್ಕಾರಿ ನಿವೇಶನ ಮಂಜೂರಾತಿಗೆ ಸಂಬಂಧಿಸಿದಂತೆ ಆಯಾ ತಾಲೂಕಿನ ತಹಶೀಲ್ದಾರರು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು ಜಂಟಿಯಾಗಿ ಸಭೆಯನ್ನು ಮಾಡಿ ನಿವೇಶನ ರಹಿತರಿಗೆ ನಿವೇಶನಗಳನ್ನು ಹಂಚಿಕೆ ಮಾಡಲು ಗ್ರಾಮಗಳಲ್ಲಿ ಲಭ್ಯವಿರುವ ಸರ್ಕಾರಿ ಜಮೀನನ್ನು ಗುರುತಿಸಿ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸುವಂತೆ ಸೂಚನೆ ನೀಡಿದರು.

ಶ್ರೀ ವೈ.ದೇವೇಂದ್ರಪ್ಪ, ಲೋಕಸಭಾ ಸದಸ್ಯರು, ಬಳ್ಳಾರಿ ಇವರು ಮಾತನಾಡಿ, ವಸತಿ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಗ್ರಾಮ ಪಂಚಾಯತಿಗೆ ನಿಯೋಜನೆ ಮಾಡಲಾದ ನೋಡಲ್ ಅಧಿಕಾರಿಗಳು ಗೈರು ಹಾಜರಾಗುತ್ತಿದ್ದಾರೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. ಈ ಬಗ್ಗೆ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ವಿಜಯನಗರ ಮಾತನಾಡಿ ಗ್ರಾಮ ಸಭೆಗಳಿಗೆ ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿಗಳು ಭಾಗವಹಿಸುತ್ತಿದ್ದು ಹಾಗೂ ಸದರಿ ಗ್ರಾಮ ಸಭೆಯ ಸಂಪೂರ್ಣ ವಿಡಿಯೋಗ್ರಾಫಿ ಹಾಗೂ ಸರ್ಕಾರದ ಮಾರ್ಗಸೂಚಿಯಂತೆ ಫಲಾನುಭವಿಗಳನ್ನು ಆಯ್ಕೆ ಮಾಡಲು ಕಟ್ಟುನಿಟ್ಟಿನ ಸೂಚನೆಯನ್ನು ಜಿ.ಪಂ. ಕಛೇರಿಯಿಂದ ನಿರ್ದೇಶನ ನೀಡಲಾಗಿದೆ ಎಂದು ಸಭೆಗೆ ತಿಳಿಸಿದರು.

**(ಕ್ರಮ :ಮುಖ್ಯ ಯೋಜನಾಧಿಕಾರಿಗಳು, ಜಿ.ಪಂ, ವಿಜಯನಗರ, ಎಲ್ಲಾ ತಹಶೀಲ್ದಾರರು / ಕಾರ್ಯನಿರ್ವಾಹಕ ಅಧಿಕಾರಿಗಳು, ವಿಜಯನಗರ ಜಿಲ್ಲೆ)**

**18) ನಗರ ವಸತಿ ಯೋಜನೆ :**

ಪಿ.ಎಂ.ಎ.ವೈ ಯೋಜನೆಯಡಿ ನಗರ ಪ್ರದೇಶಕ್ಕೆ ಸಂಬಂಧಿಸಿದಂತೆ 644 ಗುರಿ ನಿಗದಿಪಡಿಸಲಾಗಿದೆ ಎಂದು ಹಾಜರಿದ್ದ ಅಧಿಕಾರಿಗಳು ಸಭೆಗೆ ವಿವರಣೆ ನೀಡಿದರು.

ಮಾನ್ಯ ಸಚಿವರು ಮಾತನಾಡಿ ನಿವೇಶನ ರಹಿತರಿಗೆ ನಿವೇಶನ ಒದಗಿಸಲು ಕ್ರಮವಹಿಸುವಂತೆ ಸೂಚನೆಯನ್ನು ನೀಡಿದರು. ಮುಂದುವರೆದು ಜಿ ಪ್ಲಸ್ 1, 2 ರಂತೆ ಅಗತ್ಯಕ್ರಮವಹಿಸುವಂತೆ ಸೂಚನೆಯನ್ನು ನೀಡಿದರು.

ಮಾನ್ಯ ಜಿಲ್ಲಾಧಿಕಾರಿಗಳು ಮಾತನಾಡಿ, ಹೊಸಪೇಟೆ ಮತ್ತು ಕಮಲಾಪುರ ಪಟ್ಟದಲ್ಲಿ ನಿವೇಶನ ಲಭ್ಯತೆ ಬಗ್ಗೆ ಅಗತ್ಯ ಕ್ರಮವಹಿಸುವಂತೆ ಸೂಚನೆಯನ್ನು ನೀಡಿದರು.

**(ಕ್ರಮ :ಯೋಜನಾ ನಿರ್ದೇಶಕರು, ಡಿ.ಯು.ಡಿ.ಸಿ. ವಿಜಯನಗರ ಜಿಲ್ಲೆ)**



Scanned by CamScanner

19) **ಕಂದಾಯ ಯೋಜನೆ:**

ತಹಶೀಲ್ದಾರರು, ವಿಜಯನಗರ ಇವರು ಮಾತನಾಡಿ, ಸಂಧ್ಯಾ ಸುರಕ್ಷಾ ಯೋಜನೆಯಡಿ ಒಟ್ಟು 124613 ಪಿಂಚಣಿದಾರರಿದ್ದು, ಪಿಂಚಣಿದಾರರ ಪರಿಶೀಲನೆಗಾಗಿ ಮೊಬೈಲ್ ಆ್ಯಪ್ ಮೂಲಕ ಪರಿಶೀಲಿಸಿದ್ದು, 106099 ರಷ್ಟು ಪಿಂಚಣಿದಾರರನ್ನು ಪರಿಶೀಲನೆ ಮಾಡಲಾಗಿದೆ. ಬಾಕಿ 18316 ಇರುತ್ತವೆ, ಶೇ. 83.15 % ಪ್ರಗತಿ ಸಾಧಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಜಿಲ್ಲೆಯಲ್ಲಿ 520 ಜನ ಮೃತಪಟ್ಟಿರುತ್ತಾರೆ. ಈ ಪೈಕಿ 496 ಮೃತ ಕುಟುಂಬಗಳಿಗೆ ಡಿ.ಬಿ.ಟಿ. ಮೂಲಕ ಪರಿಹಾರ ಮೊತ್ತವನ್ನು ಕೇಂದ್ರದಿಂದ ರೂ.50,000/- ಹಾಗೂ ರಾಜ್ಯ ಸರ್ಕಾರದಿಂದ ಬಿ.ಪಿ.ಎಲ್.ಕುಟುಂಬದವರಿಗೆ ರೂ.1.00 ಲಕ್ಷ ವಿತರಿಸಲಾಗುತ್ತಿದೆ ಎಂದು ಸಭೆಗೆ ಮಾಹಿತಿ ನೀಡಿದರು. ಈವರೆಗೂ ಒಟ್ಟು 906 ಸಕ್ರಿಯ ಕೋವಿಡ್-19 ಪ್ರಕರಣಗಳು ಪತ್ತೆಯಾಗಿದ್ದು, 196 ಸೋಂಕಿತರು ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಹರ್ಷಲ್ ಬೋಯರ್ ನಾರಾಯಣರಾವ್)
ಸದಸ್ಯ ಕಾರ್ಯದರ್ಶಿ, ಕರ್ನಾಟಕ (20 ಅಂಶ) ಅನುಷ್ಠಾನ ಸಮಿತಿ (ತ್ರೈಮಾಸಿಕ) ಹಾಗೂ
ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್, ವಿಜಯನಗರ

(ಶ್ರೀಮತಿ ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಅಧ್ಯಕ್ಷರು, ಕರ್ನಾಟಕ (20 ಅಂಶ) ಅನುಷ್ಠಾನ ಸಮಿತಿ (ತ್ರೈಮಾಸಿಕ) ಮತ್ತು ಮುಜರಾಯಿ ಹಜ್ ಮತ್ತು ವಕ್ಫ್ ಸಚಿವರು ಹಾಗೂ ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವರು, ಕರ್ನಾಟಕ ಸರ್ಕಾರ.



Scanned by CamScanner